ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 28 : 80

ಸದಸ್ಯರ ಹೆಸರು : ಶ್ರೀ ಟಿ. ವಿ. ಜಯಚಂದ್ರ (ಶಿರಾ)

ಉತ್ತರಿಸುವ ಸಚಿವರು : ಶ್ರೀ ಬಿ. ಎಸ್. ಯಡಿಯೂರಪ್ಪ (ಮುಖ್ಯಮಂತ್ರಿಗಳು)

ಕ್ರ. ಸಂ.	ಪ್ರಶ್ನೆ	ಉತ್ತರ
ಅ.	ಬೆಂಗಳೂರಿನ ತಿಪ್ಪಗೊಂಡನಹಳ್ಳಿ ಜಲಾಶಯದ ಪ್ರದೇಶ (Catchment Area) ದಲ್ಲಿ ಕಲ್ಲುಗಣಿ ಗುತ್ತಿಗೆಯನ್ನು ನಿಷೇಧಿಸಿದ್ದರೂ ಸಹ ಅನಧಿಕೃತವಾಗಿ ಗಣಿಗಾರಿಕೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?	ಹೌದು.
ಆ.	ಹಾಗಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮವೇನು?	ದಿನಾಂಕ : 18-11-03ರ ಸರ್ಕಾರಿ ಅಧಿಸೂಚನೆ ಸಂಖ್ಯೆ : FEE 215 ENV 2000 ದನ್ವಯ ತಿಪ್ಪಗೊಂಡನಹಳ್ಳಿ ಜಲಾಶಯದ ಪ್ರದೇಶ (Catchment Area) ದಲ್ಲಿ ಹೊಸದಾಗಿ ಕಲ್ಲುಗಣಿ ಗುತ್ತಿಗೆಗಳ ಮಂಜೂರಾತಿ ಹಾಗೂ ಚಾಲ್ತಿಯಲ್ಲಿರುವ ಗುತ್ತಿಗೆಗಳ ನವೀಕರಣವನ್ನು ಮಾಡುವಂತಿಲ್ಲ. ಈ ಅಂಶವನ್ನು ಕಟ್ಟುನಿಟ್ಟಾಗಿ ಪಾಲಿಸಲಾಗುತ್ತಿದೆ. ಅಲ್ಲದೇ, ಅಣೆಕಟ್ಟಿನ ಸುತ್ತ 2ಕಿಲೋ ಮೀಟರ್ ವ್ಯಾಪ್ತಿಯೊಳಗೆ ವ್ಯವಸಾಯೇತರ ಚಟುವಟಿಕೆಗಳಿಗೆ ನಿಷೇಧವಿದ್ದು, ಈ ವ್ಯಾಪ್ತಿಯೊಳಗಿನ 4 ಕಲ್ಲುಗಣಿಗುತ್ತಿಗೆಗಳನ್ನು ರದ್ದುಗೊಳಿಸಲಾಗಿದೆ. ಈ ಪ್ರದೇಶದಲ್ಲಿನ 5 ಕ್ರಷರ್ ಘಟಕಗಳನ್ನು ರದ್ದುಪಡಿಸಲು ಕ್ರಮ ಜರುಗಿಸುವಂತೆ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಗೆ ತಿಳಿಸಲಾಗಿದೆ. ಈ ಪ್ರದೇಶದಲ್ಲಿ ನಡೆಯುತ್ತಿದ್ದ ಅಕ್ರಮ ಗಣಿಗಾರಿಕೆಯನ್ನು ತಡೆದು, 6 ಪ್ರಕರಣಗಳನ್ನು ಪೊಲೀಸ್ ಠಾಣೆಯಲ್ಲಿ ದಾಖಲಿಸಿದ್ದು, 2 ಪ್ರಕರಣಗಳಿಗೆ ಸಂಬಂಧಿಸಿದಂತೆ 5.97 ಲಕ್ಷ ರೂ.ಗಳನ್ನು ದಂಡ ರೂಪದಲ್ಲಿ ಸಂಗ್ರಹಿಸಲಾಗಿದೆ.

೫.	ಬೆಂಗಳೂರು ಸುತ್ತ ಮುತ್ತ ಗಣಿಗಾರಿಕೆಯನ್ನು ಸಂಪೂರ್ಣ ನಿಷೇಧಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ?	ಇಲ್ಲ.
ಈ.	ಹಾಗಿದ್ದಲ್ಲಿ, ಸರ್ಕಾರ ಕೈಗೊಳ್ಳುವ ಕ್ರಮವೇನು?	ಅನ್ವಯಿಸುವುದಿಲ್ಲ.